ಪೂರಕ ಅಂದಾಜುಗಳು : 1998-99 (ಮೊದಲನೆ ಕಂತು)

ಶ್ರೀ ಸಿದ್ದರಾಮಯ್ಯ : (ಉಪಮುಖ್ಯಮಂತ್ರಿ) : ಮಾನ್ಯ ಅಧ್ಯಕ್ಷರೇ, ಭಾರತ ಸಂವಿಧಾನದ ಅನುಚ್ಛೇದ 205(1)ರ ಮೇರೆಗೆ 1998-99ನೇ ಸಾಲಿನ ಪೂರಕ ಅಂದಾಜುಗಳು (ಮೊದಲನೇ ಕಂತು)ನ್ನು ಮಂಡಿಸುತ್ತೇನೆ.

1998-99ನೆಯ ಆರ್ಥಿಕ ವರ್ಷದಲ್ಲಿ ಪೂರಕ ಅಂದಾಜುಗಳು (ಮೊದಲನೆಯ ಕಂತು) ಬಗ್ಗೆ ಪ್ರಸ್ತಾಪಗಳು

ಉಪ ಮುಖ್ಯಮಂತ್ರಿಗಳು ಮತ್ತು ಹಣಕಾಸು, ಯೋಜನಾ ಹಾಗೂ ಕಾರ್ಮಿಕ ಸಚಿವರು

ಮಾನ್ಯರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ಈ ಕೆಳಗಿನ ಪ್ರಸ್ತಾಪಗಳನ್ನು ಮಂಡಿಸುತ್ತಿದ್ದೇನೆ:-

1. 1999ರ ಮಾರ್ಚ್ ಅಂತ್ಯದೊಳಗಾಗಿ 'ಮೀನುಗಾರಿಕೆ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 10,00,000 ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

2. 1999ರ ಮಾರ್ಚ್ ಅಂತ್ಯದೊಳಗೆ 'ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳು; (ಜವಳಿ, ಸಕ್ಕರೆ ಮತ್ತು ರೇಷ್ಮೆ ವ್ಯವಸಾಯ ಹೊರತು) ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ಬಂಡವಾಳ ಲೆಕ್ಕದಲ್ಲಿ 10,50,00,000 ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

3. 1999ರ ಮಾರ್ಚ್ ಅಂತದೊಳಗಾಗಿ 'ಗಣಿ ಮತ್ತು ಭೂವಿಜ್ಞಾನ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 2,00,00,000 ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 2,00,00,000 ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

4. 1999ರ ಮಾರ್ಚ್ ಅಂತ್ಯದೊಳಗಾಗಿ 'ಉನ್ನತ ಶಿಕ್ಷಣ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 4,77,17,000 ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 1,20,00,000 ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

5. 1999ರ ಮಾರ್ಚ್ ಅಂತ್ಯದೊಳಗಾಗಿ 'ಯುವಜನ ಸೇವೆಗಳು' ಇದಕ್ಕೆ ಸಂಬಂಧಿಸಿದ ವೆಚ್ಚ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ಬಂಡವಾಳ ಲೆಕ್ಕದಲ್ಲಿ 70,00,00,000 ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

6. 1999ರ ಮಾರ್ಚ್ ಅಂತ್ಯದೊಳಗಾಗಿ 'ಕಲೆ, ಸಂಸ್ಕೃತಿ ಮತ್ತು ಕನ್ನಡ ಅಭಿವೃದ್ಧಿ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 53,55,000 ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

7. 1999ರ ಮಾರ್ಚ್ ಅಂತ್ಯದೊಳಗಾಗಿ 'ಸಣ್ಣ ಉಳಿತಾಯ, ರಾಜ್ಯ ಲಾಟರಿ, ವಿಮೆ, ಖಜಾನೆ ಮತ್ತು ಲೆಕ್ಕಾಡಳಿತ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ, 2,00,000 ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

8. 1999ರ ಮಾರ್ಚ್ ಅಂತ್ಯದೊಳಗಾಗಿ 'ಅರಣ್ಯ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 63,56,000 ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

9. 1999ರ ಮಾರ್ಚ್ ಅಂತ್ಯದೊಳಗಾಗಿ 'ನಗರಾಭಿವೃದ್ಧಿ' (ಬೆಂಗಳೂರು ಅಭಿವೃದ್ಧಿ ಯೋಜನೆಗಳು ಮತ್ತು ನಗರ ಮೂಲ ಸೌಕರ್ಯ ಅಭಿವೃದ್ಧಿ ನಿಗಮ ಹೊರತು ಪಡಿಸಿ) ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 10,00,000 ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

10. 1999ರ ಮಾರ್ಚ್ ಅಂತ್ಯದೊಳಗಾಗಿ 'ಕಟ್ಟಡಗಳು' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ಬಂಡವಾಳ ಲೆಕ್ಕದಲ್ಲಿ 13,24,00,000 ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

11. 1999ರ ಮಾರ್ಚ್ ಅಂತ್ಯದೊಳಗಾಗಿ 'ಸಹಕಾರ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 28,69,00,000 ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

12. 1999ರ ಮಾರ್ಚ್ ಅಂತ್ಯದೊಳಗಾಗಿ 'ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1,79,96,000 ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

13. 1999ರ ಮಾರ್ಚ್ ಅಂತ್ಯದೊಳಗಾಗಿ 'ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಕಲ್ಯಾಣ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 58,77,68,000 ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ, 10,00,00,000 ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

ಅಧ್ಯಕ್ಷರು : ಮಂಡಿಸಲಾಗಿದೆ.

ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

ಕರ್ನಾಟಕ ಧನ ವಿನಿಯೋಗ (ನಂ.1) 1998

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿ) : ಮಾನ್ಯ ಅಧ್ಯಕ್ಷರೇ, 1998ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ನಂ.1) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "1998ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ನಂ.1) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಸಿದ್ಧರಾಮಯ್ಯ (ಉಪಮುಖ್ಯಮಂತ್ರಿಗಳು) ಮಾನ್ಯ ಅಧ್ಯಕ್ಷರೇ, 1998ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ನಂ.1) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : * ವಿಧೇಯಕವನ್ನು ಮಂಡಿಸಲಾಗಿದೆ.*

---

* *ಅನುಬಂಧ I*